**NOVEMBER 19, 2025**
**AKASHAVANI - DHARWAD**
**PRADESH SAMACHARA (KANNADA) 07.05 A.M.**

**ಮುಖ್ಯಾಂಶಗಳು**

- **ಆತ್ಮ ನಿರ್ಭರ ಭಾರತದ ಸಾಧನೆಗೆ ವಾಹಕಗಳಾಗಿ ಸಹಕಾರ ಸಂಸ್ಥೆಗಳ ರಚನೆ.**
- **ವೃಷಭಾವತಿ ವ್ಯಾಲಿ ಯೋಜನೆ: ಬಾಗೇಪಲ್ಲಿ ಕ್ಷೇತ್ರದ ಕೆರೆಗಳಿಗೂ ನೀರು ಹರಿಸಲು ಸರ್ಕಾರದ ಚಿಂತನೆ.**
- **ಶಬರಿಮಲೆ ಯಾತ್ರಿಕರು ಆರೋಗ್ಯದ ಬಗ್ಗೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವಂತೆ ಸಚಿವ ದಿನೇಶ ಗುಂಡೂರಾವ್ ಮನವಿ.**
- **ಇಂದು ಕಿಸಾನ್ ಸಮ್ಮಾನ್ ನಿಧಿಯ 21ನೇ ಕಂತು ಬಿಡುಗಡೆ.**

**ಈಗ ವಾರ್ತೆಗಳ ವಿವರ**

**ಆತ್ಮ ನಿರ್ಭರ ಭಾರತ ಸಾಧನೆಗೆ, ವಾಹಕಗಳಾಗಿ** ಸಹಕಾರ ಸಂಸ್ಥೆಗಳು ಧ್ಯೇಯದಡಿ ಸಹಕಾರ ಉದ್ಯಮಶೀಲತೆಯಿಂದ ಯುವಜನ, ಮಹಿಳಾ ಮತ್ತು ಅಬಲ ವರ್ಗದ ಸಬಲೀಕರಣ ವಿ ʼಯದಡಿ ಸಹಕಾರ ಸಪ್ತಾಹ ರೂಪಿಸಲಾಗಿದೆ ಎಂದು ಕಾನೂನು, ಸಂಸದೀಯ ವ್ಯವಹಾರಗಳ ಹಾಗೂ ಪ್ರವಾಸೋದ್ಯಮ ಖಾತೆ ಸಚಿವ ಎಚ್.ಕೆ ಪಾಟೀಲ ಹೇಳಿದ್ದಾರೆ. ಹಾವೇರಿಯಲ್ಲಿ ನಡೆದ ಬೆಳಗಾವಿ ವಿಭಾಗ ಮಟ್ಟದ 72ನೇ ಅಖಿಲ ಭಾರತ ಸಹಕಾರ ಸಪ್ತಾಹ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಸಹಕಾರಿ ಸಂಸ್ಥೆಗಳು ರಾಷ್ಟ್ರದಲ್ಲಿ ಪ್ರಜಾಪ್ರಭುತ್ವದ ಶಾಲೆಗಳಿದ್ದಂತೆ. ಸಹಕಾರಿ ಕ್ಷೇತ್ರದಲ್ಲಿನ ಸಮಾಲೋಚನೆ, ಉತ್ತಮ ನಿರ್ಣಯ ಕೈಗೊಳ್ಳಲು ಅನುಕೂಲವಾಗುತ್ತದೆ. ರಾಜ್ಯದ ಸಹಕಾರ ಸಂಘಗಳು ದೇಶಕ್ಕೆ ಮಾದರಿಯಾಗಿವೆ ಎಂದರು.

<><><>

**ಎರಡು ವರ್ಷಗಳಲ್ಲಿ** ವೃಷಭಾವತಿ ಯೋಜನೆಯನ್ನು ಪೂರ್ಣಗೊಳಿಸಲು ತೀರ್ಮಾನಿಸಿದ್ದು, ಇದಕ್ಕಾಗಿ ಸಂಪುಟ ಸಭೆಯಲ್ಲಿ 650 ಕೋಟಿ ರೂಪಾಯಿಗಳ ಅನುಮೋದನೆ ದೊರೆತಿದೆ. ಒಂದು ವಾರದೊಳಗಾಗಿ ಟೆಂಡರ್ ಕರೆಯಲಾಗುವುದು ಎಂದು ಸಣ್ಣ ನೀರಾವರಿ ಖಾತೆ ಸಚಿವ ಬೋಸರಾಜು ತಿಳಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ತಾಲ್ಲೂಕಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚಿಕ್ಕಬಳ್ಳಾಪುರ, ಕೋಲಾರ, ಬೆಂಗಳೂರು ಗ್ರಾಮಾಂತರ, ತುಮಕೂರು ಸೇರಿದಂತೆ ಅಂತರ್ಜಲ ಕುಸಿತದ ಸಮಸ್ಯೆಯನ್ನು ಎದುರಿಸುತ್ತಿರುವ ಜಿಲ್ಲೆಗಳಲ್ಲಿನ ಕೆರೆಗಳಿಗೆ ಎಚ್.ಎನ್.ವ್ಯಾಲಿ, ಕೆ.ಸಿ. ವ್ಯಾಲಿ, ವೃಷಭಾವತಿ ವ್ಯಾಲಿ ಯೋಜನೆಗಳ ನೀರನ್ನು ಹರಿಸಲು ಸರ್ಕಾರ ತೀರ್ಮಾನಿಸಿದೆ. ವೃಷಭಾವತಿ ವ್ಯಾಲಿ ಯೋಜನೆಯ ನೀರನ್ನು ಬಾಗೇಪಲ್ಲಿ ಕ್ಷೇತ್ರದ ಕೆರೆಗಳಿಗೂ ಹರಿಸುವ ಪ್ರಯತ್ನ ಮಾಡಲಾಗುವುದು ಎಂದು ತಿಳಿಸಿದರು.

<><><>

**ಕೇರಳದಲ್ಲಿ ಕಲುಶಿತ ನೀರು,** ನಿಂತ ನೀರು ಅಥವಾ ಈಜು ಕೊಳದ ನೀರಿನಿಂದ ಉಂಟಾಗುವ 'ಮೆದುಳು ತಿನ್ನುವ ಅಮೀಬಾ' ಸೋಂಕು ಕಂಡುಬಂದಿದ್ದು, ಜೀವಕ್ಕೆ ಅಪಾಯವನ್ನು ಉಂಟು ಮಾಡುತ್ತದೆ. ಹಾಗಾಗಿ ರಾಜ್ಯದಿಂದ ಶಬರಿಮಲೆಗೆ ಹೋಗುವ ಯಾತ್ರಿಕರು ಆರೋಗ್ಯದ ಬಗ್ಗೆ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸುವಂತೆ ಆರೋಗ್ಯ ಖಾತೆ ಸಚಿವ ದಿನೇಶ ಗುಂಡೂರಾವ್ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದ ಮೂಲಕ ಮನವಿ ಮಾಡಿರುವ ಅವರು, ಮೆದುಳು ತಿನ್ನುವ ಅಮೀಬಾ' ಜೀವಿಯು ಮೂಗಿನಿಂದ ನೇರವಾಗಿ ಮೆದುಳು ಪ್ರವೇಶಿಸಿ ಸೋಂಕು ಹರಡುವುದರಿಂದ ಜೀವಾಪಾಯ ಹೆಚ್ಚು. ಹಾಗಾಗಿ'ಯಾತ್ರೆಯ ವೇಳೆ, ಕಲುಶಿತ ಅಥವಾ ಈಜುಕೋಳದ ನೀರಿನಿಂದ ಸ್ನಾನ ಮಾಡುವುದನ್ನು ಆದ ಷ್ಟ ನಿಯಂತ್ರಿಸಬೇಕು ಎಂದಿದ್ದಾರೆ.

<><><>

**ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ, ಭಾರತ** ಅನೇಕ ತಂತ್ರಜ್ಞಾನ ಆಧಾರಿತ ಕ್ರಮಗಳಲ್ಲಿ ಮುನ್ನಡೆ ಸಾಧಿಸುತ್ತಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರ ಹಾಗೂ ಆಹಾರ ಮತ್ತು ಸಾರ್ವಜನಿಕ ವಿತರಣೆ ಖಾತೆ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ. ದೆಹಲಿಯಲ್ಲಿ ಕೇಂದ್ರ ಗೋದಾಮು ನಿಗಮ–ಸಿ.ಡಬ್ಲ್ಯೂ.ಸಿ.ಯ ಡಿಜಿಟಲ್ ವ್ಯವಸ್ಥೆಗಳ ಉದ್ಘಾಟನೆ ನೆರವೇರಿಸಿ ನಂತರ ಮಾತನಾಡಿದ ಅವರು, ಗೋದಾಮು ಮತ್ತು ಲಾಜಿಸ್ಟಿಕ್ಸ್ ವಲಯವನ್ನು ದೇಶದ ಆರ್ಥಿಕ ಬೆಳವಣಿಗೆಯ ಪ್ರಮುಖ ಚಾಲಕ ಎಂದೇ ಪರಿಗಣಿಸಲಾಗಿದೆ. ಆಧುನಿಕ ತಂತ್ರಜ್ಞಾನ ಆಧಾರಿತ ಗೋದಾಮು ನಿರ್ಮಾಣವು ತಂತ್ರಜ್ಞಾನ ವಲಯದಲ್ಲಿ ಕ್ರಾಂತಿಯನ್ನುಂಟು ಮಾಡಿದೆ. ಭಾರತದ ಗೋದಾಮು ಮಾರುಕಟ್ಟೆ 2027ರ ವೇಳೆಗೆ ಗಮನಾರ್ಹವಾಗಿ ಏರಿಕೆ ಕಾಣುವ ನಿರೀಕ್ಷೆ ಇದೆ ಎಂದರು.

<><><>

**ಉತ್ತರಕನ್ನಡ ಜಿಲ್ಲೆಯ ಸಮಗ್ರ** ಅಭಿವೃದ್ಧಿಯ ಕುರಿತು ಪಂಚಾಯಿತಿ ವ್ಯಾಪ್ತಿಯಿಂದ  ಕೈಗೊಳ್ಳಬೇಕಾದ ಕಾಮಗಾರಿಗಳು ಮತ್ತು ಜನತೆಗೆ ಒದಗಿಸಬೇಕಾದ ಸೌಲಭ್ಯಗಳ ಕುರಿತು ಸಮಗ್ರ ವರದಿ ತಯಾರಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಅಂಗನವಾಡಿ, ಶಾಲೆ, ರಸ್ತೆ ಅಭಿವೃದ್ಧಿ ಕಾಮಗಾರಿಯಿಂದ ಪ್ರಾರಂಭಗೊಂಡು ಎಲ್ಲಾ ಅಗತ್ಯ ಯೋಜನೆಗಳನ್ನು ಒಳಗೊಂಡ ಇಲಾಖಾವಾರು ಬೇಡಿಕೆಯ ಸಮಗ್ರ ಯೋಜನಾ ವರದಿಯನ್ನು ಇದೇ 25 ರೊಳಗೆ ಸಲ್ಲಿಸುವಂತೆ ತಿಳಿಸಿದ್ದಾರೆ. ಯೋಜನೆಯಲ್ಲಿ ಸಾರ್ವಜನಿಕರ ಬೇಡಿಕೆಯನುಸಾರ ಕಾಮಗಾರಿಗಳನ್ನು ಸೇರ್ಪಡೆ ಮಾಡುವ ಮೂಲಕ ಅಧಿಕಾರಿಗಳು ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಹೇಳಿದ್ದಾರೆ.

<><><>

**ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನ**ಹಳ್ಳಿಯಲ್ಲಿ ಪದವಿ ಕಾಲೇಜಿನ ಆಡಳಿತ ಭವನ ಕಟ್ಟಡವನ್ನು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, ಉನ್ನತ ಶಿಕ್ಷಣಕ್ಕೆ ಸರ್ಕಾರ ಉತ್ತೇಜನ ನೀಡುತ್ತಿದೆ. ದೇವನಹಳ್ಳಿ ಪದವಿ ಕಾಲೇಜಿನ ಸಭಾಂಗಣ ನವೀಕರಣ ಮತ್ತು ಕಾಲೇಜು ಕ್ರೀಡಾಂಗಣ ಅಭಿವೃದ್ಧಿ, ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಲ್ಯಾಬ್ ಮತ್ತು 8 ಕೊಠಡಿ ವ್ಯವಸ್ಥೆ, ಶೌಚಾಲಯ ನಿರ್ಮಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಒಂದು ತಿಂಗಳಲ್ಲಿ ದೇವನಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಗೇಟ್‌ನಿಂದ ಕಾಲೇಜಿನವರೆಗೆ ಸಿಸಿ ರಸ್ತೆ ನಿರ್ಮಾಣಕ್ಕೆ ಹಾಗೂ ಕಾಲೇಜು ಮುಂಭಾಗ ಬಸ್ ನಿಲ್ದಾಣ ನಿರ್ಮಾಣಕ್ಕೆ ಆದ್ಯತೆ ಮೇರೆಗೆ ಶೀಘ್ರ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು. ವಿದ್ಯಾರ್ಥಿಗಳು ಈ ಸೌಲಭ್ಯಗಳ ಸದುಪಯೋಗಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

<><><>

**ಡಿಸೆಂಬರ್ 19 ರಿಂದ ಮೂರು ದಿನಗಳ** ಕಾಲ ಚಾಲುಕ್ಯ ಉತ್ಸವ–2025 ನ್ನು ರಾಷ್ಟ್ರೀಯ ಉತ್ಸವವಾಗಿ ಬಾದಾಮಿ, ಪಟ್ಟದಕಲ್ಲ ಮತ್ತು ಐಹೊಳೆಯಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಶಾಸಕ ಭೀಮಸೇನ ಚಿಮ್ಮನಕಟ್ಟಿ ತಿಳಿಸಿದ್ದಾರೆ. ಬಾಗಲಕೋಟೆಯಲ್ಲಿ ಚಾಲುಕ್ಯ ಉತ್ಸವ–2025 ಕಾರ್ಯಕ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ‘ಚಾಲುಕ್ಯ ಉತ್ಸವ–2025 ಕಾರ್ಯಕ್ರಮ ಡಿಸೆಂಬರ್ 19 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸುವರು. ಚಾಲುಕ್ಯರ ಇತಿಹಾಸ, ಕಲೆ, ಸಾಹಿತ್ಯ ಹಾಗೂ ಸಂಗೀತವನ್ನು ಮುಂದಿನ ಪೀಳಿಗೆಗೆ ಪರಿಚಯಿಸಲು ಬಜೆಟ್‌ನಲ್ಲಿ 2 ಕೋಟಿ ರೂಪಾಯಿ ಅನುದಾನ ಮೀಸಲಿಡಲಾಗಿದೆ. ಡಿಸೆಂಬರ್ 19 ರಂದು ಬಾದಾಮಿ, 20 ರಂದು ಪಟ್ಟದಕಲ್ಲ, 21 ರಂದು ಐಹೊಳೆಯಲ್ಲಿ ಕಾರ್ಯಕ್ರಮ ಆಯೋಜಿಸಲಾಗುತ್ತದೆ. ರಾಷ್ಟ್ರೀಯ ಹಾಗೂ ಅಂತಾರಾಷ್ಟ್ರೀಯ ಕಲಾವಿದರು ಹಾಗೂ ಸ್ಥಳೀಯ ಕಲಾವಿದರಿಗೂ ಅವಕಾಶ ನೀಡಲಾಗುವುದು ಎಂದರು.

<><><>

**ಪ್ರಧಾನವಂತ್ರಿ ನರೇಂದ್ರ ಮೋದಿ** ಅವರು ಇಂದು ಕೊಯಮತ್ತೂರಿನಲ್ಲಿ ಕಿಸಾನ್ ಸಮ್ಮಾನ್ ನಿಧಿಯ 21ನೇ ಕಂತನ್ನು ಬಿಡುಗಡೆ ಮಾಡಲಿದ್ದಾರೆ. ಸುಮಾರು 9 ಕೋಟಿ ರೈತರು ಪಿಎಂ ಕಿಸಾನ್ ಸಮ್ಮಾನ್ ಯೋಜನೆಯ ಪ್ರಯೋಜನ ಪಡೆಯಲಿದ್ದಾರೆ. ಬೆಂಗಳೂರಿನ ಐಸಿಎಆರ್–ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆಯಲ್ಲಿ ಇದರ ನೇರ ಪ್ರಸಾರವಿದ್ದು, ರಾಜ್ಯದ 200 ರೈತರು ಭಾಗವಹಿಸಲಿದ್ದಾರೆ.ಮುಖ್ಯ ಅತಿಥಿಗಳಾಗಿ ಬೆಂಗಳೂರು ಗ್ರಾಮಾಂತರ ಸಂಸದ ಡಾಕ್ಟರ್ ಸಿ.ಎನ್. ಮಂಜುನಾಥ್ ಪಾಲ್ಗೊಳ್ಳಲಿದ್ದಾರೆ.

<><><>

**ಕೇಂದ್ರ ರೈಲ್ವೆ ಇಲಾಖೆ ಬೃಹತ್ ಸಿಮೆಂಟ್** ಸರಕು ಸಾಗಣೆ ಶುಲ್ಕವನ್ನು ಕಡಿಮೆ ಮಾಡಿದೆ. ಇದು ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳಿಗೆ ಕೈಗೆಟುಕುವ ವಸತಿಯನ್ನು ಬೆಂಬಲಿಸಲಿದೆ. ಕೇಂದ್ರ ರೈಲ್ವೆ, ಮಾಹಿತಿ ಮತ್ತು ಪ್ರಸಾರ ಹಾಗೂ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಖಾತೆ ಸಚಿವ ಅಶ್ವಿನಿ ವೈಷ್ಣವ್ ಅವರು, ಹೊಸದಿಲ್ಲಿಯಲ್ಲಿ ಕಂಟೇನರ್ಗಳಲ್ಲಿ ಬೃಹತ್ ಸಿಮೆಂಟ್ ದರಗಳ ತರ್ಕಬದ್ಧಗೊಳಿಸುವಿಕೆ ಮತ್ತು ಬೃಹತ್ ಸಿಮೆಂಟ್ ಟರ್ಮಿನಲ್ಗಳ ನೀತಿಯನ್ನು ಅನಾವರಣಗೊಳಿಸಿದರು. ಈ ನೀತಿಯು ರೈಲ್ವೆ ಸಾರಿಗೆ ಸುಧಾರಣೆಗಳ ಭಾಗವಾಗಿದೆ. ಮಧ್ಯಮ ಮತ್ತು ಬಡ ಕುಟುಂಬಗಳು ತಮ್ಮ ಕನಸಿನ ಮನೆಯನ್ನು ನಿರ್ಮಿಸುವಾಗ ಈ ಸುಧಾರಣೆಗಳು ಸಿಮೆಂಟ್ ವೆಚ್ಚವನ್ನು ಕಡಿಮೆ ಮಾಡುತ್ತವೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

<><><>

**ಅರಣ್ಯದಲ್ಲಿರುವ ಅಪರೂಪದ**ಔಷಧೀಯ ಸಸ್ಯಗಳನ್ನು ಉಳಿಸುವ ಕೆಲಸವಾಗಬೇಕು. ಸಮುದಾಯಗಳು ಹಾಗೂ ನಾಗರಿಕರ ಜವಾಬ್ದಾರಿಯುತ ನಡೆಯಿಂದ ಸಸ್ಯ ಸಂಕುಲವನ್ನು ಕಾಪಾಡಲು ಸಾಧ್ಯ ಎಂದು ರಾಜ್ಯ ಜೀವವೈವಿಧ್ಯ ಮಂಡಳಿ ಅಧ್ಯಕ್ಷ ಜಗದೀಶ ವಾಡ್ನಾಳ್ ಹೇಳಿದ್ದಾರೆ. ಶಿವಮೊಗ್ಗದ ಸೊರಬ ತಾಲೂಕಿನ ಹುನವಳ್ಳಿ ಹುಲಿ ಕಣಿವೆಯಲ್ಲಿ ಆಯೋಜಿತ, ಹಸಿರು ಸಮಾವೇಶಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

<><><>

**ಕರ್ನಾಟಕ ರಾಜ್ಯ ಮಾಲಿನ್ಯ** ನಿಯಂತ್ರಣ ಮಂಡಳಿಯು ಯಶಸ್ವಿಯಾಗಿ 50 ವ ರ್ಗಳನ್ನು ಪೂರೈಸಿರುವ ಹಿನ್ನೆಲೆಯಲ್ಲಿ ಮಂಡಳಿಯ ಸುವರ್ಣ ಮಹೋತ್ಸವ –2025ನ್ನು ಇಂದು ಬೆಂಗಳೂರಿನ ಅರಮನೆ ಮೈದಾನದ "ಕೃ ್ಣ ವಿಹಾರ"ದಲ್ಲಿ ಆಯೋಜಿಸಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಸಮಾರಂಭ ಉದ್ಘಾಟಿಸಲಿದ್ದು, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಉಪಸ್ಥಿತರಿರುವರು. ಅರಣ್ಯ ಖಾತೆ ಸಚಿವ ಈಶ್ವರ ಬಿ. ಖಂಡ್ರೆ ಅಧ್ಯಕ್ಷತೆ ವಹಿಸಲಿದ್ದಾರೆ.

<><><>

**ಕನ್ನಡ ಮತ್ತು ಸಂಸ್ಕೃತಿ** ಇಲಾಖೆಯ ವಿಶೇಷ ಘಟಕ ಯೋಜನೆಯಡಿ, ಧಾರವಾಡದ ಡಾಕ್ಟರ್ ದ.ರಾ.ಬೇಂದ್ರೆ ಭವನದಲ್ಲಿ ಇಂದು ಬೆಳಗ್ಗೆ 10 ಗಂಟೆಗೆ, "ಹಾಡಿರೇ ರಾಗಗಳ–ತೂಗಿರೇ ದೀಪಗಳ" ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದೆ. ಕರ್ನಾಟಕ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾದ ಚಂದ್ರಕಾಂತ ಬೆಲ್ಲದ, ಕಾರ್ಯಕ್ರಮ ಉದ್ಘಾಟಿಸಲಿದ್ದು, ಡಾಕ್ಟರ್ ದ.ರಾ.ಬೇಂದ್ರೆ ರಾಷ್ಟ್ರೀಯ ಸ್ಮಾರಕ ಟ್ರಸ್ಟ್‌ನ ಅಧ್ಯಕ್ಷರಾದ ಡಾಕ್ಟರ್ ಸರಜೂ ಕಾಟ್ಕರ್ ಅಧ್ಯಕ್ಷತೆ ವಹಿಸುವರು.

<><><>

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

- **ಆತ್ಮ ನಿರ್ಭರ ಭಾರತದ ಸಾಧನೆಗೆ ವಾಹಕಗಳಾಗಿ ಸಹಕಾರ ಸಂಸ್ಥೆಗಳ ರಚನೆ.**
- **ವೃಷಭಾವತಿ ವ್ಯಾಲಿ ಯೋಜನೆ; ಬಾಗೇಪಲ್ಲಿ ಕ್ಷೇತ್ರದ ಕೆರೆಗಳಿಗೂ ನೀರು ಹರಿಸಲು ಸರ್ಕಾರದ ಚಿಂತನೆ.**
- **ಶಬರಿಮಲೆ ಯಾತ್ರಿಕರು ಆರೋಗ್ಯದ ಬಗ್ಗೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವಂತೆ ಸಚಿವ ದಿನೇಶ ಗುಂಡೂರಾವ್ ಮನವಿ.**
- **ಇಂದು ಕಿಸಾನ್ ಸಮ್ಮಾನ್ ನಿಧಿಯ 21ನೇ ಕಂತು ಬಿಡುಗಡೆ.**

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ.**

<><><>